## ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 1010 |
| 2 | ಸದಸ್ಯರ ಹೆಸರು | : | ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3 | ಉತ್ತರಿಸುವ ದಿನಾಂಕ | : | 14-12-2023 |
| 4 | ಉತ್ತರಿಸುವವರು | : | ಉಪ ಮುಖ್ಯಮಂತ್ರಿಗಳು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರಿನ ರಸ್ತೆಗಳು ಹಾಗೂ ಚರಂಡಿಗಳು ದುರಸ್ತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು.<br>ರಸ್ತೆ ಹಾಗೂ ಚರಂಡಿಗಳ ಸ್ಥಿತಿಯು ಅದರ ಬಳಕೆ ಮತ್ತು ನೈಸರ್ಗಿಕ ಅಂಶಗಳನ್ನು ಆಧರಿಸಿರುತ್ತದೆ. ಆದ್ದರಿಂದ, ಕಾಲಕಾಲಕ್ಕೆ ನಿರ್ವಹಣೆ ಮತ್ತು ದುರಸ್ಥಿ ಕಾರ್ಯ ನಡೆಸಬೇಕಾಗುತ್ತದೆ. |
| ಆ) | ಬಂದಿದ್ದಲ್ಲಿ ಬೃಹತ್ ಬೆಂಗಳೂರಿನ ರಸ್ತೆಗಳನ್ನು ಹಾಗೂ ಚರಂಡಿಗಳನ್ನು ಅಭಿವೃದ್ಧಿಪಡಿಸಲು ನೀಡಲಾದ ಅನುದಾನದ ಮೊತ್ತವೆಷ್ಟು: | 2022-23ನೇ ಸಾಲು: ರೂ.3142.25 ಕೋಟಿ ಒದಗಿಸಿದೆ.<br>2023-24ನೇ ಸಾಲು: ರೂ.800.00 ಕೋಟಿ ಮೀಸಲಿರಿಸಿದೆ. |
| ಇ) | ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನವು ಬಹಳ ಕಡಿಮೆಯಾಗಿರುವುದರಿಂದ ಬೃಹತ್ ಬೆಂಗಳೂರು ಅನ್ನು ಹೆಚ್ಚಿನ ರೀತಿಯಲ್ಲಿ ಅಭಿವೃದ್ಧಿ ಪಡಿಸಬೇಕಾಗಿರುವುದರಿಂದ ಸರ್ಕಾರ ಇನ್ನೂ ಹೆಚ್ಚಿನ ಅನುದಾನವನ್ನು ಬಿಡುಗಡೆ ಮಾಡಲು ಯಾವ ಕ್ರಮವನ್ನು ಕೈಗೊಂಡಿದೆ? (ವಿವರ ನೀಡುವುದು) | • 2023-24ನೇ ಸಾಲಿನಲ್ಲಿ ಕನಿಷ್ಠ ನಿರ್ವಹಣಾ ವೆಚ್ಚವಿರುವ ವೈಟ್ ಟಾಪಿಂಗ್ ಕಾಮಗಾರಿಗಳನ್ನು ನಿರ್ವಹಿಸಲು ರೂ.800.00 ಕೋಟಿಗಳ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ.<br>• ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸ್ವಂತ ಸಂಪನ್ಮೂಲದಲ್ಲಿ ರೂ.1000.00 ಕೋಟಿಗಳನ್ನು ಎಸ್ಕ್ರೋ ಖಾತೆಯಲ್ಲಿ ಇರಿಸಿ ವೈಟ್ ಟಾಪಿಂಗ್ ಕಾಮಗಾರಿಗಳನ್ನು ನಿರ್ವಹಿಸಲು ಕ್ರಮವಹಿಸಲಾಗುತ್ತಿದೆ.<br>• ರಸ್ತೆ ಮತ್ತು ಪಾದಚಾರಿ ಮಾರ್ಗಗಳ ನಿರ್ವಹಣೆಗಾಗಿ ಪ್ರತಿ ವಾರ್ಡ್‌ಗೆ ರೂ.75.00 ಲಕ್ಷಗಳ ಅನುದಾನ ನೀಡಲಾಗಿದೆ.<br>• **<u>ಅಮೃತ ನಗರೋತ್ಥಾನ ಯೋಜನೆಯಡಿ ಅಭಿವೃದ್ಧಿಪಡಿಸಲಾಗುತ್ತಿರುವ ರಸ್ತೆಗಳು:</u>** (see table below) |

| | ರಸ್ತೆ ಉದ್ದ (ಕಿ.ಮೀ. ಗಳಲ್ಲಿ) | ಮೊತ್ತ (ರೂ.ಕೋಟಿಗಳಲ್ಲಿ) |
|---|---|---|
| ವಾರ್ಡ್ ರಸ್ತೆಗಳು | 1705.32 | 2501.16 |
| ಆರ್ಟೀರಿಯಲ್ ಮತ್ತು ಸಬ್-ಆರ್ಟೀರಿಯಲ್ ರಸ್ತೆಗಳು | 441.35 | 641.09 |
| ಒಟ್ಟು | **2146.67** | **3142.25** |

**ಸಂಖ್ಯೆ: ನಅಇ 430 ಎಂಎನ್‌ವೈ 2023 (ಇ)**

(ಡಿ.ಕೆ. ಶಿವಕುಮಾರ್)
ಉಪ ಮುಖ್ಯಮಂತ್ರಿ